## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಜಿಎಂ/1201/2021
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17 ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 02/11/2021

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಬೆಳಗಾವಿ ಜಿಲ್ಲೆ ಇವರು ಗದಗ ಜಿಲ್ಲೆ ರಾಮಗೇರಿ, ಶಿರಹಟ್ಟಿಯಲ್ಲಿ ಗ್ರಾಮ ಲೆಕ್ಕಾಧಿಕಾರಿಯವರಾದ (ಹಾಲಿ ಮುಂಡರಗಿ ತಾಲ್ಲೂಕು, ಭೂಮಿ ಕೇಂದ್ರ ತಹಸೀಲ್ದಾರರ ಕಛೇರಿ) ಶ್ರೀಮತಿ ನೂರಜಾನ್‌ಬಿ ಸೊನ್ನದ ತಂದೆ ಇಮಾಮಸಾಬರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಳಗಾವಿ ಜಿಲ್ಲೆ, ಇವರು ಗದಗ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯ ಪೋಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀಮತಿ ನೂರಜಾನ್‌ಬಿ ಸೊನ್ನದ ತಂದೆ ಇಮಾಮಸಾಬ, ಗ್ರಾಮ ಲೆಕ್ಕಾಧಿಕಾರಿ, ರಾಮಗೇರಿ, ತಾಲ್ಲೂಕ: ಶಿರಹಟ್ಟಿ, ಹಾಲಿ: ಗ್ರಾಮಲೆಕ್ಕಾಧಿಕಾರಿ, ಭೂಮಿ ಕೇಂದ್ರ ತಹಶೀಲ್ದಾರ ಕಛೇರಿ, ಮುಂಡರಗಿ, ಗದಗ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ.) ದೂರುದಾರರಾದ ಶ್ರೀ ಧರಣೇಂದ್ರ ತಂದೆ ಗುಣಪಾಲಪ್ಪ ಬರಿಗಾಲಿ, ವಿಳಾಸ: ಸೋಮೇಶ್ವರ ಗುಡಿ ಹತ್ತಿರ, ಲಕ್ಷ್ಮೇಶ್ವರ, ತಾ: ಶಿರಹಟ್ಟಿ, ಜಿಲ್ಲೆ: ಗದಗ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರನ್ನು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) ದೂರಿನ ಸಂಕ್ಷಿಪ್ತ ವಿವರಣೆ:-

i. ದೂರುದಾರರು ಅವರ ಹೆಸರಿನಲ್ಲಿರುವ ಶಿರಹಟ್ಟಿ ತಾಲ್ಲೂಕಿನ ರಾಮಗಿರಿ ಗ್ರಾಮದ ರೀ.ಸ. ನಂ. 2/1 ರಲ್ಲಿ ಅರ್ಧ ಭಾಗವನ್ನು ಪಿರ್ಯಾದಿಗೆ ಬಿಟ್ಟುಕೊಡುವ ಕೆಲಸವನ್ನು ಪೂರ್ಣಗೊಳಿಸಲು ಎದುರುದಾರ್‌ರವರು 3,000/- ರೂಪಾಯಿಗಳ ಲಂಚದ ಹಣ ಕೊಡಲು ಬೇಡಿಕೆ ಇಟ್ಟಿದ್ದು, ಈ ಬಗ್ಗೆ ಮೊಬೈಲ್‌ನಲ್ಲಿ ಸಂಭಾಷಣೆಯನ್ನು ಧ್ವನಿ ಮುದ್ರಿಸಿಕೊಂಡಿದ್ದು ಇರುತ್ತದೆ. ಸದರಿ ಹಣವನ್ನು ದೂರುದಾರರಿಗೆ ನೀಡಲು ಇಷ್ಟವಿಲ್ಲದ ಕಾರಣ ದಿನಾಂಕ 20/02/2017 ರಂದು ಗದಗ ಎಸಿಬಿ ರವರಿಗೆ ಮೊಬೈಲ್‌ನಲ್ಲಿ ಧ್ವನಿ ಮುದ್ರಣದೊಂದಿಗೆ ದೂರುದಾರರು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಗದಗ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಅಧಿಕಾರಿಯವರು ತಮ್ಮ ಠಾಣೆಯ ಗುನ್ನೆ ನಂ. 01/2017 ರಲ್ಲಿ ಪ್ರಕರಣ ನೋಂದಾಯಿಸಿ ಕೊಂಡಿರುತ್ತಾರೆ.

ii. ತನಿಖಾಧಿಕಾರಿಗಳು ದಿನಾಂಕ 21/02/2017 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಗಳನ್ನು ಸಿ.ಡಿ.ಗೆ ವರ್ಗಾಯಿಸಿಕೊಂಡು ದೂರನ್ನು ಸಲ್ಲಿಸಿದ್ದು ಸದರಿ ಸಿ.ಡಿ.ಯನ್ನು ಪಂಚರಿಗೆ ಕೇಳಿಸಿ, ಲಪಿಕರಣ ಮಾಡಿ ವಶಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 3,000/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆಯಲಾಯಿತು. ಸದರಿ ಹಣಕ್ಕೆ ಪಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಪಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು

ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಕುಮಾರಿ ಮಂಜುಳಾ ತಂದೆ ಧೂಳಪ್ಪ ಗಾಜಿ, ಕಿರಿಯ ಸಹಾಯಕಿ, ವಿಭಾಗೀಯ ನಿಯಂತ್ರಣಾಧಿಕಾರಿಗಳ ಕಛೇರಿ, ವಾ.ಕ.ರ.ಸಾ.ಸಂಸ್ಥೆ, ಗದಗ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಗಳು ನೀಡಿದ ಮೊಬೈಲ್‌ನಲ್ಲಿ ಧ್ವನಿ ಸಂಭಾಷಣೆಯನ್ನು ರೆಕಾರ್ಡ್ ಮಾಡಲು ದೂರುದಾರರಿಗೆ ತಿಳಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ಕರವಸ್ತ್ರದಿಂದ ತಮ್ಮ ಮುಖವನ್ನು ವರೆಸಿಕೊಳ್ಳುವುದರ ಮೂಲಕ ಸೂಚನೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

iii. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ದಿನಾಂಕ 21/02/2017 ರಂದು ಎದುರುದಾರರ ಕಂದಾಯ ಇಲಾಖೆಯ ಸರ್ಕಾರಿ ವಸತಿ ಗೃಹ, ಇಂದಿರಾನಗರ, ಲಕ್ಷ್ಮೇಶ್ವರದಲ್ಲಿ ದೂರುದಾರರು ಮತ್ತು ನೆರಳು ಸಾಕ್ಷಿ ಕುಮಾರಿ ಮಂಜುಳಾ ತಂದೆ ಧೂಳಪ್ಪ ಗಾಜಿ ಇವರ ಜೊತೆ ಎದುರುದಾರರಿಂದ ರೂ. 3,000/- ಲಂಚದ ಹಣವನ್ನು ನೀಡಿದಾಗ

ಎದುರುದಾರರು ತಮ್ಮ ಎಡಗೈಯಿಂದ ಪಡೆದು ತಮ್ಮ ಮುಂದಿನ ಟೇಬಲ್ ಮೇಲಿದ್ದ ಕೆಲವು ಕಾಗದಪತ್ರಗಳ ಕೆಳಗೆ ಇಟ್ಟಿರುತ್ತಾರೆ. ನಂತರ ದೂರುದಾರರು ವಸತಿ ಗೃಹದ ಮುಂದಿನ ಪಾವಟಿ ಮೇಲೆ ನಿಂತುಕೊಂಡು ಕರವಸ್ತ್ರದಿಂದ ತಮ್ಮ ಮುಖವನ್ನು ವರೆಸಿಕೊಳ್ಳುವುದರ ಮೂಲಕ ನಿಗದಿತ ಸೂಚನೆಯನ್ನು ತನಿಖಾಧಿಕಾರಿಯವರಿಗೆ ನೀಡಿರುತ್ತಾರೆ. ತನಿಖಾಧಿಕಾರಿಯವರು ಪಂಚರ ಸಮಕ್ಷಮ ಎದುರುದಾರರ ಮನೆ ಒಳಗೆ ಬಂದು ತಮ್ಮ ಪರಿಚಯ ಮಾಡಿಕೊಂಡು 1ನೇ ಪಂಚ ಸಾಕ್ಷಿಯಾದ ಕುಮಾರಿ ಮಂಜುಳಾ ಧೂಳಪ್ಪ ಗಾಜಿ ಇವರಿಗೆ ತನಿಖಾಧಿಕಾರಿಯವರು ಸೂಚಿಸಿದಂತೆ ಎದುರುದಾರರ ಮುಂದಿನ ಟೇಬಲ್ ಮೇಲೆ ಕೆಲವು ದಾಖಲಾತಿಗಳ ಕೆಳಗೆ ಇಟ್ಟಿದ್ದ ಲಂಚದ ಹಣವನ್ನು ತೆಗೆದು ಪರಿಶೀಲಿಸಿದಾಗ ಸದರಿ ನೋಟುಗಳ ಮೌಲ್ಯ ನೋಟುಗಳ ನಂಬರ್ ಪ್ರಾಯೋಗಿಕ ಪಂಚನಾಮೆಯಲ್ಲಿ ಬರೆದಂತಹ ನೋಟುಗಳ ನಂಬರಿಗೂ ಮೌಲ್ಯಕ್ಕೂ ತಾಳೆಯಾಗಿದ್ದು ಇರುತ್ತದೆ. ಸದರಿ ಲಂಚದ ಹಣವಾದ 3,000/- ರೂ.ಗಳನ್ನು ಎದುರುದಾರರಿಂದ ಅಮಾನತ್ತು ಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಬಲಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಅದೇ ರೀತಿ ಎದುರುದಾರರ ಎಡಗೈ ಬೆರಳುಗಳನ್ನು ಇನ್ನೊಂದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಲಂಚದ ಹಣ ಇಟ್ಟಿದ್ದ ಟೇಬಲ್ ಮೇಲಿನ ಭಾಗವನ್ನು ಹಾಗೂ ಲಂಚದ ಹಣದ ಮೇಲೆ ಮುಚ್ಚಿದ್ದ ಪೇಪರಿನ ಹಿಂಭಾಗವನ್ನು ಸ್ವಚ್ಛವಾದ ಕಾಟನ್‌ನಿಂದ ವರೆಸಿ ತೆಗೆದು ಬಟ್ಟಲಿನಲ್ಲಿ ತಯಾರಿಸಿದ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ನೆರಳು ಸಾಕ್ಷಿ ಕುಮಾರಿ

ಮಂಜುಳಾ ಧೂಳಪ್ಪ ಗಾಜಿ. ಸಹ ಪಂಚ ಅವರಿಂದ ಅಲ್ಲಿಯ ನಡುವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿ, ದೂರುದಾರರ ಹಾಗೂ ಪಂಚರ ಸಮಕ್ಷಮ ಸದರಿ ಹಣ, ಮುದ್ದೆ ಮಾಲುಗಳನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ತನಿಖಾಧಿಕಾರಿಗಳು ವಶಪಡಿಸಿ ಕೊಂಡಿರುತ್ತಾರೆ. ಟ್ರಾಪ್ ಕಾಲದಲ್ಲಿ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ತಹಶೀಲ್ದಾರ್ ರವರಾದ ಶ್ರೀ ಎಂ. ಎಸ್. ಮಾದನಬಾವಿ ಗ್ರೇಡ್ -2, ಶಿರಹಟ್ಟಿ, ಪ್ರಭಾರ ವಿಶೇಷ ತಹಶೀಲ್ದಾರ್, ಲಕ್ಷ್ಮೇಶ್ವರ ಇವರಿಗೆ ಹೆಡ್ ಫೋನ್ ಮುಖಾಂತರ ಕೇಳಿಸಿದ್ದು ಅವುಗಳಲ್ಲಿಯ ಧ್ವನಿಯಲ್ಲಿ ಎದುರುದಾರರ ಧ್ವನಿ ಎಂದು ಗುರ್ತಿಸಿರುತ್ತಾರೆ. ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

iv. ಸದರಿ ಹಣದ ಬಗ್ಗೆ ತನಿಖಾಧಿಕಾರಿಯು ಎದುರುದಾರರಿಗೆ ಸಮಜಾಯಿಷಿ ಕೇಳಲಾಗಿ ಅವರು ತಮ್ಮ ಸಮಜಾಯಿಷಿಯಲ್ಲಿ "ರಾಮಗೇರಿ ಗ್ರಾಮದ ಬರಗಾಲಿಯವರ ಹಕ್ಕು ಪತ್ರ ಮಾಡಲು ವರದಿ ನನ್ನ ಕಡೆ ಬಂದಿದ್ದು ಸದರಿಯವರು ಆವಾಗಲೆ ದುಡ್ಡು ಕೊಡುತ್ತೇನೆ ಎಂದು ಹೇಳಿ ತಾವೇ ದುಡ್ಡು ಕೊಟ್ಟಿರುತ್ತಾರೆ. ಕಂದಾಯ ನಿರೀಕ್ಷಕರು ನಮ್ಮ ಕಡೆ ವರದಿಗೆ ದುಡ್ಡು ಕೇಳುತ್ತಿದ್ದರು. ನಾವು ಅವರಿಗೆ ವರದಿಯೊಂದಿಗೆ ದುಡ್ಡು ತಲುಪಿಸುತ್ತಿದ್ದು ಅದರಿಂದ ನನ್ನದು ಅದರಲ್ಲಿ ಏನು ತಪ್ಪು ಇಲ್ಲ" ಎಂದು ಸಕಾರಾತ್ಮಕ ಲಿಖಿತ ಹೇಳಿಕೆ ನೀಡಿರುತ್ತಾರೆ. ಸದರಿಯವರು ಲಂಚದ ಹಣಕ್ಕೆ ಬೇಡಿಕೆ ಇಟ್ಟ ಬಗ್ಗೆ ಮೊಬೈಲ್‌ನಲ್ಲಿ ಮಾತನಾಡಿದ ಸಂಭಾಷಣೆ, ಪಿನಾಪ್ತಲಿನ್ ಪೌಡರ್ ಲೇಪಿತ ಹಣವನ್ನು ಸ್ವೀಕರಿಸಿದ ಬಗ್ಗೆ ರಾಸಾಯನಿಕ ವಿಶ್ಲೇಷಣಾ ವರದಿಯಿಂದ ದೃಢಪಟ್ಟಿರುತ್ತದೆ.

v. ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

vi. ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಯನ್ನು ದಿನಾಂಕ 10/08/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಯನ್ನು ಪರಿಶೀಲಿಸಲಾಗಿ ಎದುರುದಾರರು ಜಪ್ತಿ ಮಹಜರ್ ಕಾಲದಲ್ಲಿ ನೀಡಿದ ಸಮಜಾಯಿಷಿಗೂ ಹಾಗೂ ಪರಿವೀಕ್ಷಣಾ ಟಿಪ್ಪಣಿಗೆ ನೀಡಿದ ಸಮಜಾಯಿಷಿಗೂ ಪೂರಕವಾಗದೆ ಪರಿವೀಕ್ಷಣಾ ಟಿಪ್ಪಣಿಗೆ ನೀಡಿದ ಸಮಜಾಯಿಷಿಯಲ್ಲಿ ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

3) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

4) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

5) ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡುಬರುತ್ತದೆ.

6) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii) ರ ಅಡಿಯಲ್ಲಿ ಮೇಲ್ನೋಟಕ್ಕೆ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ.

7) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮದ ಬಗ್ಗೆ ಈ ವರದಿ ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

4/11/21

**(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)**

ಉಪಲೋಕಾಯುಕ್ತರು

ಕರ್ನಾಟಕ ರಾಜ್ಯ, ಬೆಂಗಳೂರು.